ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು: 560001**

ಸಂಖ್ಯೆ: ಆ ಆಶಾ ಕೊ.ವೈ.ಸಮೀಕ್ಷೆ/ಘೋ/2020–21 ದಿನಾಂಕ : 28.04.2020

## ಸುತ್ತೋಲೆ

ವಿಷಯ: ಕೋವಿಡ್-19ರ ಸಂಬಂಧ ರಾಜ್ಯದ ಎಲ್ಲಾ ಕುಟುಂಬಗಳ ಸಾರ್ವತ್ರಿಕ ಸಮೀಕ್ಷೆ ನಡೆಸುವ ಬಗ್ಗೆ

ಉಲ್ಲೇಖ: ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಸುತ್ತೋಲೆ ಸಂಖ್ಯೆ: DHS/DD/SSU/17/2019-20 Date: 27.04.2020

--------

ರಾಜ್ಯದಲ್ಲಿ ಕೊರೋನಾ ವೈರಸ್ ಹರಡುತ್ತಿರುವ ಹಿನ್ನಲೆಯಲ್ಲಿ I.L.I / SARI / ಇತರ ತೀವ್ರ ರೀತಿಯ ಆರೋಗ್ಯ ಸಮಸ್ಯೆಯನ್ನು ಹೊಂದಿರುವ ರೋಗಿಯನ್ನು ಮುಂಚಿತವಾಗಿ ಗುರುತಿಸಿ ಕೋವಿಡ್ -19 ಸೋಂಕಿನಿಂದ ಉಂಟಾಗಬಹುದಾದ ವೈದ್ಯಕೀಯ ಸಂಕೀರ್ಣತೆಯಿಂದ ಅವರನ್ನು ರಕ್ಷಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ರಾಜ್ಯದ ಎಲ್ಲಾ ಕುಟುಂಬಗಳ ಸಾರ್ವತ್ರಿಕ ಸಮೀಕ್ಷೆಯನ್ನು ಮಾಡಬೇಕೆಂದು ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಲಾಗಿದೆ. ಸದರಿ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಸಮೀಕ್ಷೆಯಲ್ಲಿ ಸಂಗ್ರಹಿಸುವ ಮಾಹಿತಿಯನ್ನು ನೇರವಾಗಿ ಅಪ್‌ಲೋಡ್ ಮಾಡಲು ಒಂದು ಮೊಬೈಲ್ ಆಪ್‌ನ್ನು (Health watch) ಸಹ ಅಭಿವೃದ್ಧಿಪಡಿಸಲಾಗಿದೆ. ಈ ಸಮೀಕ್ಷೆಯನ್ನು ಮತದಾರರ ಪಟ್ಟಿಯ ಆಧಾರದ ಮೇಲೆ ಪ್ರತಿ ಮತಗಟ್ಟೆ ಅಧಿಕಾರಿಯ ವ್ಯಾಪ್ತಿಯನ್ನು ಒಂದು ಘಟಕವನ್ನಾಗಿ ಪರಿಗಣಿಸಿ ಸಮೀಕ್ಷೆ ಕಾರ್ಯವನ್ನು 5 ದಿನಗಳ ಒಳಗಾಗಿ ರಾಜ್ಯದಾದ್ಯಂತ ನಡೆಸಲು ನಿರ್ಧರಿಸಲಾಗಿದೆ.

ಸದರಿ ಸಮೀಕ್ಷೆಗೆ ಪ್ರತಿ ಮತಗಟ್ಟೆಯ ವ್ಯಾಪ್ತಿಯಲ್ಲಿ ಮತಗಟ್ಟೆ ಅಧಿಕಾರಿಯ(BLO) ಕೆಲಸವನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಹಾಯವಾಗುವಂತೆ ಹೆಚ್ಚುವರಿಯಾಗಿ ಒಬ್ಬ ಶಿಕ್ಷಕರನ್ನು ನೇಮಿಸಿ ಸಮೀಕ್ಷೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚಿಸಲಾಗಿರುತ್ತದೆ. ಪ್ರತಿಯೊಂದು ಮತಗಟ್ಟೆವಾರು ಸಂಗ್ರಹಿಸಲಾದ ಮಾಹಿತಿಯನ್ನು ನೇರವಾಗಿ Health watch mobile app ಮೂಲಕ ಅಥವಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಲಭ್ಯವಿರುವ ಗಣಕಯಂತ್ರ ಅಥವಾ ಲ್ಯಾಪ್‌ಟಾಪ್ ಮೂಲಕ ಆನ್‌ಲೈನ್ ನಲ್ಲಿ ಅಪ್‌ಲೋಡ್ ಮಾಡಲು ಸಹ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನಲೆಯಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಈ ಕೆಳಗಿನಂತೆ ಕ್ರಮ ವಹಿಸಲು ಸೂಚಿಸಿದೆ.

28/4/20

Scanned by CamScanner

www.ksge.in

1. ಈಗಾಗಲೇ ಮತಗಟ್ಟೆ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರುಗಳು ಕಡ್ಡಾಯವಾಗಿ ಸದರಿ ಸಮೀಕ್ಷೆಯಲ್ಲಿ ಭಾಗವಹಿಸುವುದು.

2. ಈ ಹಿಂದೆ ಕಾರ್ಯನಿರ್ವಹಿಸಿದ ಮತಗಟ್ಟೆ ಅಧಿಕಾರಿ ಮರಣ/ನಿವೃತ್ತಿ,/ ತೀವ್ರತರದ ಆರೋಗ್ಯ ಸಮಸ್ಯೆಯಿಂದ ಲಭ್ಯವಿಲ್ಲದಿದ್ದಲ್ಲಿ ಸದರಿಯವರ ಜಾಗಕ್ಕೆ ಮತ್ತೊಬ್ಬ ಶಿಕ್ಷಕರನ್ನು ಸಮೀಕ್ಷಾ ಕಾರ್ಯಕ್ಕೆ ನೇಮಿಸಲು ಹೆಸರನ್ನು ಸೂಚಿಸುವುದು.

3. ಸರ್ಕಾರಿ/ಅನುದಾನಿತ ಶಿಕ್ಷಕರ ಲಭ್ಯತೆಯ ಆಧಾರದ ಮೇಲೆ ಪ್ರತಿ ಮತಗಟ್ಟೆ ಅಧಿಕಾರಿಯೊಂದಿಗೆ ಮತ್ತೊಬ್ಬ ಶಿಕ್ಷಕರನ್ನು ಹೆಚ್ಚುವರಿಯಾಗಿ ಸಮೀಕ್ಷಾ ಕಾರ್ಯಕ್ಕಾಗಿ ನೇಮಿಸುವುದು.

4. ಮತ ಗಟ್ಟೆ ಅಧಿಕಾರಿ ಮತ್ತು ಪ್ರತಿಯೊಂದು ಮತಗಟ್ಟೆಗೆ ಹೆಚ್ಚುವರಿ ಸಮೀಕ್ಷಾ ಅಧಿಕಾರಿಯಾಗಿ ನೇಮಿಸಿರುವ ಶಿಕ್ಷಕರ ಮಾಹಿತಿಯನ್ನು ಈ ಕೆಳಕಂಡ ನಮೂನೆಯಲ್ಲಿ ದಿನಾಂಕ: 29-4-2020ರ ಸಂಜೆಯೊಳಗೆ ಸಂಬಂದಪಟ್ಟ ಅಪರ ಜಿಲ್ಲಾಧಿಕಾರಿಗಳಿಗೆ ತಹಸೀಲ್ದಾರ್‌ರ ಮೂಲಕ ತಪ್ಪದೆ ಸಲ್ಲಿಸುವುದು.

ನಮೂನೆ

ವಿಧಾನಸಭಾ ಕ್ಷೇತ್ರದ ಹೆಸರು----------------------

| ಕ್ರ.ಸಂ | ಸಮೀಕ್ಷೆಗೆ ನೀಡಲಾದ ಮತಗಟ್ಟೆಯ ಸಂಖ್ಯೆ ಮತ್ತು ಹೆಸರು | ಮತಗಟ್ಟೆ ಅಧಿಕಾರಿಯ ಹೆಸರು | ಮೊಬೈಲ್ ಸಂಖ್ಯೆ | ಸಮೀಕ್ಷಾ ಕಾರ್ಯಕ್ಕಾಗಿ ಹೆಚ್ಚುವರಿಯಾಗಿ ನೇಮಿಸಿರುವ ಶಿಕ್ಷಕರ ಹೆಸರು | ಮೊಬೈಲ್ ಸಂಖ್ಯೆ |
|---|---|---|---|---|---|
| 1 | 2 | 3 | 4 | 5 | 6 |

5. ಮೇಲಿನ ಎಲ್ಲಾ ಸಿಬ್ಬಂದಿಗಳಿಗೆ ಜಿಲ್ಲಾಡಳಿತದ ಸಹಕಾರದೊಂದಿಗೆ ಸಮೀಕ್ಷೆ ಹಾಗೂ ತಂತ್ರಾಂಶದ ಬಗ್ಗೆ ತರಬೇತಿಯನ್ನು ಆಯೋಜಿಸುವುದು.

28/4/20

Scanned by CamScanner

6. ಬಿ.ಆರ್.ಸಿ/ಬಿ.ಆರ್.ಪಿ/ಇ.ಸಿ.ಓ ಮತ್ತು ಸಿ.ಆರ್.ಪಿಗಳು ಸಮೀಕ್ಷೆಗೆ ನಿಯೋಜಿಸಿದ ಎಲ್ಲಾ ಶಿಕ್ಷಕರು ನಿಗದಿತ ಸಮಯದಲ್ಲಿ ತಮ್ಮ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸುತ್ತಿರವ ಬಗ್ಗೆ ಕಾಲ ಕಾಲಕ್ಕೆ ಪರಿಶೀಲನೆ ನಡೆಸಿ ವರದಿ ಪಡೆಯುವುದು.

7. ಶಿಕ್ಷಕರು ತಮ್ಮಲ್ಲಿರುವ **smart phone** ಉಪಯೋಗಿಸಿ ಸಮೀಕ್ಷಾ ಕಾರ್ಯದ ವಿವರಗಳನ್ನು **Health watch app** ಮೂಲಕ ನೇರವಾಗಿ ಸಮೀಕ್ಷಾ ಮಾಹಿತಿಯನ್ನು upload ಮಾಡಲು ಇಚ್ಛಿಸಿದಲ್ಲಿ ಅವರಿಗೆ ಎಲ್ಲಾ ಪೂರಕ ವ್ಯವಸ್ಥೆಗಳನ್ನು ಕಲ್ಪಿಸುವುದು.

8. ಒಂದು ವೇಳೆ ಶಿಕ್ಷಕರು ಜಿಲ್ಲಾಡಳಿತದ ಅನುಮತಿ ಮೇರೆಗೆ ನಿಗಧಿತ ನಮೂನೆಯಲ್ಲಿ ದತ್ತಾಂಶಗಳನ್ನು ಭೌತಿಕವಾಗಿ ಸಂಗ್ರಹಿಸಿ ನಂತರ ತಂತ್ರಾಂಶದಲ್ಲಿ ಅಳವಡಿಸಲು ಇಚ್ಛಿಸಿದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಸೂಕ್ತ ಗಣಕಯಂತ್ರ/ತಂತ್ರಾಂಶದ ವ್ಯವಸ್ಥೆ ಹಾಗೂ ಡಾಟಾ ಎಂಟ್ರಿ ಆಪರೇಟರ್‌ಗಳ ವ್ಯವಸ್ಥೆಯನ್ನು ಕಲ್ಪಿಸುವುದು. ಅಂತಹ ಸನ್ನಿವೇಶದಲ್ಲಿ ಸಮೀಕ್ಷೆ ನಡೆಸಿದ ಶಿಕ್ಷಕರು ವೈಯಕ್ತಿಕವಾಗಿ ತಾವೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ತೆರಳಿ ಡಾಟ ಎಂಟ್ರಿ ಆಪರೇಟರ್‌ಗಳ ಮೂಲಕ ಮಾಹಿತಿಯನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.

ಈ ಮೇಲಿನ ಎಲ್ಲಾ ಕಾರ್ಯಗಳಿಗೆ ಅಗತ್ಯವಾದ ಆರ್ಥಿಕ ನೆರವನ್ನು ಸಂಬಂದಿಸಿದ ಜಿಲ್ಲಾಧಿಕಾರಿಗಳ ಕಛೇರಿಯಿಂದ ಪಡೆದುಕೊಳ್ಳಲು ತಿಳಿಸಿದೆ.

20/4/20

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ಎಲ್ಲಾ ಜಿಲ್ಲಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
3. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ರವರಿಗೆ ಮಾಹಿತಿಗಾಗಿ
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರಿಗೆ ಮಾಹಿತಿಗಾಗಿ

www.ksge in

Scanned by CamScanner